ಶಾಲಾ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
**Karnataka School Quality Assessment & Accreditation Council**
ಕೆ.ಎಸ್.ಇ.ಎ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. ದೂರವಾಣಿ ಸಂಖ್ಯೆ 23341615, 23562283, 29720300
e-mail: ksqaacbangalore@gmail.com ksqaacntsenmms@gmail.com & ksqaacbengaluru@gmail.com

ಸಂಖ್ಯೆ:**KSEAB/DPIE/KSQ3(NNEX)/3/2025-KSQAAC** ದಿನಾಂಕ:08.09.2025

# ಸುತ್ತೋಲೆ

ವಿಷಯ:- 2025-26ನೇ ಸಾಲಿನ ನ್ಯಾಷನಲ್ ಮೀನ್ಸ್-ಕಮ್ ಮೆರಿಟ್ ವಿದ್ಯಾರ್ಥಿವೇತನ (National Means-cum- Merit Scholarship- NMMS) ಪರೀಕ್ಷೆಗೆ Online ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ:- Department of School Education & Literacy ನವದೆಹಲಿ ರವರ ಪತ್ರ ಸಂಖ್ಯೆ:F.No.1-11/ 2024-SS, Dated:04.07.2025.

~*~*~*~

2025-26ನೇ ಸಾಲಿನಲ್ಲಿ ನ್ಯಾಷನಲ್ ಮೀನ್ಸ್-ಕಮ್ ಮೆರಿಟ್ ವಿದ್ಯಾರ್ಥಿವೇತನ (National Means- cum-Merit Scholarship- NMMS) ಪರೀಕ್ಷೆಯನ್ನು, ಉಲ್ಲೇಖ-1 ರಲ್ಲಿನ Department of School Education & Literacy ನವದೆಹಲಿ ರವರ ಮಾರ್ಗಸೂಚಿಯಂತೆ ನಡೆಸಲು Online ಮೂಲಕ ಅರ್ಜಿ ಆಹ್ವಾನಿಸಲಾಗಿರುತ್ತದೆ. ಸದರಿ ಪರೀಕ್ಷೆಯನ್ನು 2025-26ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಮತ್ತು ಸ್ಥಳೀಯ ಸಂಸ್ಥೆ (Local body schools) ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ **ದಿನಾಂಕ:07.12.2025** ರಂದು ನಡೆಸಲಾಗುವುದು. ಅದರಂತೆ NMMS ಪರೀಕ್ಷೆಗೆ Online ಮೂಲಕ ಅರ್ಜಿಯನ್ನು **ದಿನಾಂಕ:10.09.2025** ರಿಂದ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ವೆಬ್‌ಸೈಟ್ https://kseab.karnataka.gov.in ನ NMMS ಲಾಗಿನ್‌ನಲ್ಲಿ ಲಭ್ಯ ಮಾಡಲಾಗುವುದು. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ತಮ್ಮ ಶಾಲಾ ವಿದ್ಯಾರ್ಥಿಗಳ ಅರ್ಜಿಗಳನ್ನು ಕಡ್ಡಾಯವಾಗಿ Online ಮೂಲಕವೇ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **15.10.2025** ಆಗಿರುತ್ತದೆ.

**<u>NMMS ಪರೀಕ್ಷೆಯ ಸಂಕ್ಷಿಪ್ತ ವಿವರ</u>:-** 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವುದು, ಆರ್ಥಿಕವಾಗಿ ಹಿಂದುಳಿದ ಪ್ರತಿಭಾವಂತ ವಿದ್ಯಾರ್ಥಿಗಳು ಮಾಧ್ಯಮಿಕ ಶಾಲಾ ಹಂತದಲ್ಲಿ ಶಾಲೆಯಿಂದ ಹೊರಗುಳಿಯದಂತೆ ತಡೆಯುವುದು ಮತ್ತು ಅವರ ವಿದ್ಯಾಭ್ಯಾಸದ ಮುಂದುವರಿಕೆಗೆ ಪ್ರೇರೇಪಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಸದರಿ ಪರೀಕ್ಷೆಯನ್ನು ಕನ್ನಡ, ಇಂಗ್ಲೀಷ್, ಉರ್ದು, ಮರಾಠಿ ಮತ್ತು ತೆಲುಗು ಮಾಧ್ಯಮಗಳಲ್ಲಿ ನಡೆಸುತ್ತಿದ್ದು, ಈ ಪರೀಕ್ಷೆಯನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ತಾಲ್ಲೂಕು ಕೇಂದ್ರಗಳಲ್ಲಿ ನಡೆಸಲಾಗುವುದು.

## <u>ಅರ್ಹತೆ (Eligibility)</u> :-

ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳಲ್ಲಿ 2025-26ನೇ ಸಾಲಿನಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಪೂಷಕರ ವಾರ್ಷಿಕ ಆದಾಯ ರೂ 3.50(ಮೂರು ಲಕ್ಷದ ಐವತ್ತು ಸಾವಿರ ರೂಗಳು ಮಾತ್ರ) ಲಕ್ಷಕ್ಕಿಂತ ಕಡಿಮೆ ಇರುವ ವಿದ್ಯಾರ್ಥಿಗಳು ಮಾತ್ರ NMMS ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

**ವಸತಿಯುತ ಶಾಲೆಗಳ ವಿದ್ಯಾರ್ಥಿಗಳು NMMS ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. (ಉದಾ: ಮೊರಾರ್ಜಿ ದೇಸಾಯಿ, ಕಿತ್ತೂರುರಾಣಿ ಚೆನ್ನಮ್ಮ, ನವೋದಯ ಶಾಲೆ, ವಾಜಪೇಯಿ ಶಾಲೆ, ಏಕಲವ್ಯ, ಕೆ.ಜಿ.ಬಿ.ವಿ, ಅಂಬೇಡ್ಕರ್ ವಸತಿ ಶಾಲೆ ಇತ್ಯಾದಿ) ಹಾಗೆಯೇ ಕೇಂದ್ರೀಯ ವಿದ್ಯಾಲಯ, ಸೈನಿಕ ಶಾಲೆಗಳ ವಿದ್ಯಾರ್ಥಿಗಳು ಕೂಡ ಈ ಪರೀಕ್ಷೆಗೆ ಅರ್ಹರಿರುವುದಿಲ್ಲ. ಸರ್ಕಾರದಿಂದ ಅನುದಾನ ಪಡೆಯುವ ಯಾವುದೇ ಖಾಸಗಿ ಅನುದಾನಿತ ವಸತಿ ಶಾಲೆಗಳ ವಿದ್ಯಾರ್ಥಿಗಳು ಸಹ ಈ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಮಂಡಲಿಯ ಸೂಚನೆಯನ್ನು ಉಲ್ಲಂಘಿಸಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಅವಕಾಶವಿರುವುದಿಲ್ಲ ಹಾಗೂ ಅಂತಹ ಶಾಲಾ ಮುಖ್ಯಶಿಕ್ಷಕರ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು.**

## NMMS ಪರೀಕ್ಷೆಗೆ ಅರ್ಜಿ ಸಲ್ಲಿಸಲು ಇರುವ ನಿಬಂಧನೆಗಳು:-

- ಪರೀಕ್ಷೆಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಸರ್ಕಾರಿ, ಅನುದಾನಿತ ಜೆಟಿಎಸ್ ಶಾಲೆಗಳು ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳಲ್ಲಿ Regular ವಿದ್ಯಾರ್ಥಿಯಾಗಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು.
- ಅರ್ಜಿ ಸಲ್ಲಿಸಬೇಕಾದ ವಿದ್ಯಾರ್ಥಿಗಳು 7ನೇ ತರಗತಿ ಪರೀಕ್ಷೆಯಲ್ಲಿ ಸಾಮಾನ್ಯ ವರ್ಗ ಹಾಗೂ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಶೇ.55 ರಷ್ಟು ಅಂಕಗಳನ್ನು ಅಥವಾ ತತ್ಸಮಾನ ಗ್ರೇಡ್ ಹಾಗೂ ಪ.ಜಾ ಮತ್ತು ಪ.ಪಂಗಡದ ವಿದ್ಯಾರ್ಥಿಗಳು ಶೇ.50 ರಷ್ಟು ಅಂಕಗಳನ್ನು ಅಥವಾ ತತ್ಸಮಾನ ಗ್ರೇಡ್ ಗಳಿಸಿರಬೇಕು.
- ಪೋಷಕರ ವಾರ್ಷಿಕ ವರಮಾನ ರೂ.3,50,000/-ಮೀರಿರಬಾರದು **(ಎಸ್‌ಸಿ,ಎಸ್‌ಟಿ ಹಾಗೂ ಎಲ್ಲಾ ವರ್ಗದವರನ್ನೊಳಗೊಂಡಂತೆ)**

## NMMS ಪರೀಕ್ಷೆಗೆ ಇರುವ ಪ್ರಶ್ನೆ ಪತ್ರಿಕೆಗಳು:-

### ಪತ್ರಿಕೆ-1- ಮಾನಸಿಕ ಸಾಮರ್ಥ್ಯ ಪರೀಕ್ಷೆ:- ( Mental Ability Test -MAT)

ಈ ಪತ್ರಿಕೆಯಲ್ಲಿ 90 ಬಹುಆಯ್ಕೆ ಪ್ರಶ್ನೆಗಳಿರುತ್ತವೆ. ಪ್ರತಿ ಪ್ರಶ್ನೆಗೂ ಒಂದು ಅಂಕದಂತೆ 90 ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಪ್ರಶ್ನೆಪತ್ರಿಕೆಯು ವಿದ್ಯಾರ್ಥಿಗಳು ಕಾರಣ ನೀಡುವ, ವಿಶ್ಲೇಷಿಸುವ, ಸಂಶ್ಲೇಷಿಸುವ ಇತ್ಯಾದಿ ಸಾಮರ್ಥ್ಯಗಳನ್ನು ಅಳೆಯುವ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

### ಪತ್ರಿಕೆ-2-ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ:-(Scholastic Aptitude Test- SAT)

ಈ ಪತ್ರಿಕೆಯಲ್ಲಿ 90 ಅಂಕಗಳಿಗೆ ಒಟ್ಟು 90 ಬಹುಆಯ್ಕೆ ಪ್ರಶ್ನೆಗಳಿರುತ್ತವೆ. ಇವುಗಳಲ್ಲಿ 35 ಪ್ರಶ್ನೆಗಳು ವಿಜ್ಞಾನ (ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ), 35 ಪ್ರಶ್ನೆಗಳು ಸಮಾಜ ವಿಜ್ಞಾನ (ಇತಿಹಾಸ, ಭೂಗೋಳ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ ಮತ್ತು ವ್ಯವಹಾರ ಅಧ್ಯಯನ) ಮತ್ತು 20 ಪ್ರಶ್ನೆಗಳು ಗಣಿತ ವಿಷಯಕ್ಕೆ ಸಂಬಂಧಿಸಿರುತ್ತವೆ.

### 2025-26 ನೇ ಸಾಲಿನ NMMS ಪರೀಕ್ಷೆಗೆ ನಿಗದಿಪಡಿಸಿರುವ ಪ್ರಶ್ನೆಪತ್ರಿಕೆಗಳ ಸ್ವರೂಪ:-

| ಪರೀಕ್ಷೆ | ಒಟ್ಟು ಪ್ರಶ್ನೆಗಳು | ನಿಗದಿಪಡಿಸಿದ ಸಮಯ | ಅಂಕಗಳ ವಿಂಗಡಣೆ |
|---|---|---|---|
| ಪತ್ರಿಕೆ-1<br>ಬೌದ್ಧಿಕ ಸಾಮರ್ಥ್ಯ ಪರೀಕ್ಷೆ<br>(Mental Ability Test-MAT) | 90 | 90 ನಿಮಿಷಗಳು<br>(30 Minutes compensatory time for candidates with benchmark **CWSN**) | ಪ್ರತಿ ಪ್ರಶ್ನೆಗೆ ಒಂದು ಅಂಕದಂತೆ ಒಟ್ಟು 90 ಅಂಕಗಳು |
| ಪತ್ರಿಕೆ-2<br>ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ<br>(Scholastic Aptitude Test- SAT) | 90 | 90 ನಿಮಿಷಗಳು<br>(30 Minutes compensatory time for candidates with benchmark **CWSN**) | ವಿಜ್ಞಾನ ವಿಷಯಕ್ಕೆ 35 ಅಂಕಗಳು, ಸಮಾಜ ವಿಜ್ಞಾನಕ್ಕೆ 35 ಅಂಕಗಳು, ಗಣಿತ ವಿಷಯಕ್ಕೆ 20 ಅಂಕಗಳು. (ಪ್ರತಿ ಪ್ರಶ್ನೆಗೆ ಒಂದು ಅಂಕದಂತೆ ಒಟ್ಟು 90 ಅಂಕಗಳು) |

## 2025-26 ನೇ ಸಾಲಿನ NMMS ಪರೀಕ್ಷೆಗೆ ನಿಗದಿಪಡಿಸಿರುವ ವೇಳಾಪಟ್ಟಿ:-

| ಪ್ರಶ್ನೆ ಪತ್ರಿಕೆಗಳು | ಪರೀಕ್ಷಾ ದಿನಾಂಕ | ನಿಗದಿಪಡಿಸಿದ ಸಮಯ |
|---|---|---|
| ಪತ್ರಿಕೆ-1<br>ಬೌದ್ಧಿಕ ಸಾಮರ್ಥ್ಯ ಪರೀಕ್ಷೆ<br>(Mental Ability Test-MAT) | 07.12.2025<br>ಭಾನುವಾರ | **ಬೆಳಗ್ಗೆ 10.30- 12.00ರವರೆಗೆ**<br>(ಒಟ್ಟು 90 ನಿಮಿಷಗಳು)<br>(ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗಳಿಗೆ 30 ನಿಮಿಷ ಹೆಚ್ಚುವರಿ ಸಮಯವಿರುತ್ತದೆ /<br>30 Minutes extra time will be given to CWSN students) |
| ಪತ್ರಿಕೆ-2<br>ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ<br>(Scholastic Aptitude Test-SAT) | 07.12.2025<br>ಭಾನುವಾರ | **ಮಧ್ಯಾಹ್ನ 2.00 ರಿಂದ 3.30 ರವರೆಗೆ**<br>(ಒಟ್ಟು 90 ನಿಮಿಷಗಳು)<br>(ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗಳಿಗೆ 30 ನಿಮಿಷ ಹೆಚ್ಚುವರಿ ಸಮಯವಿರುತ್ತದೆ. /<br>30 Minutes extra time will be given to CWSN students) |

## NMMS ಪರೀಕ್ಷೆಯ ಆಯ್ಕೆ ಪ್ರಕ್ರಿಯೆ (Selection Procedure):-

ಈ ಪರೀಕ್ಷೆಯು ಎರಡು ಪ್ರಶ್ನೆಪತ್ರಿಕೆಗಳನ್ನು ಒಳಗೊಂಡಿದ್ದು, ಸಾಮಾನ್ಯ ಮತ್ತು ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಎರಡೂ ಪತ್ರಿಕೆಗಳಲ್ಲಿ ಸರಾಸರಿ ಕನಿಷ್ಠ ಶೇ.40 ರಷ್ಟು ಅಂಕಗಳನ್ನು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಎರಡೂ ಪತ್ರಿಕೆಗಳಲ್ಲಿ ಸರಾಸರಿ ಕನಿಷ್ಠ ಶೇ.32 ರಷ್ಟು ಅಂಕಗಳನ್ನು ಪಡೆಯಬೇಕು. ಪ್ರತಿ ಜಿಲ್ಲೆಯಲ್ಲಿ ಪರೀಕ್ಷೆ ಬರೆದ ಒಟ್ಟು ವಿದ್ಯಾರ್ಥಿಗಳಲ್ಲಿ ವಿವಿಧ ಜಾತಿ/ವರ್ಗಗಳ ವಿದ್ಯಾರ್ಥಿಗಳನ್ನು ಚಾಲ್ತಿಯಲ್ಲಿರುವ ಮೀಸಲಾತಿ ಹಾಗೂ ಅರ್ಹತಾ ನಿಯಮಗಳ ಅನುಸಾರ Rank ಆಧರಿಸಿ DSERT ವತಿಯಿಂದ ಆಯ್ಕೆ ಮಾಡಲಾಗುವುದು.

8ನೇ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ಸಾಮಾನ್ಯ ಮತ್ತು ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಶೇ.55 ರಷ್ಟು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು.

## ವಿದ್ಯಾರ್ಥಿವೇತನ ವಿತರಣೆ:-

ಈ ಪರೀಕ್ಷೆಯಲ್ಲಿ ಆಯ್ಕೆಯಾದವರಿಗೆ 9ನೇ ತರಗತಿಯಿಂದ ಮಾಸಿಕ ರೂ.1000/-ರಂತೆ ವರ್ಷಕ್ಕೆ ರೂ.12,000/- ಗಳನ್ನು 4 ವರ್ಷಗಳವರೆಗೆ (ದ್ವಿತೀಯ ಪಿ.ಯು.ಸಿ ಯವರೆಗೆ) ವಿದ್ಯಾರ್ಥಿವೇತನವನ್ನು MoE DoSEL ವತಿಯಿಂದ ನೀಡಲಾಗುವುದು. ವಿದ್ಯಾರ್ಥಿವೇತನವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ DoSEL ನವದೆಹಲಿ ರವರು ಸಿದ್ಧಪಡಿಸಿರುವ ಎನ್.ಎಸ್.ಪಿ 2.0 ವೆಬ್‌ಸೈಟ್: www.scholorships.gov.in ನಲ್ಲಿ ವಿದ್ಯಾರ್ಥಿವೇತನಕ್ಕೆ 9ನೇ ತರಗತಿಯಿಂದ 12ನೇ ತರಗತಿವರೆಗೆ ಆನ್‌ಲೈನ್‌ನಲ್ಲಿ ಪ್ರತಿ ವರ್ಷವು ಅರ್ಜಿ ಸಲ್ಲಿಸಬೇಕಾಗಿರುತ್ತದೆ. (ಹೆಚ್ಚಿನ ಮಾಹಿತಿಗೆ DSERT ಯನ್ನು ಸಂಪರ್ಕಿಸುವುದು)

## ವಿದ್ಯಾರ್ಥಿವೇತನ ಮುಂದುವರಿಕೆಗೆ ನಿಬಂಧನೆಗಳು:-

NMMS ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮುಂದುವರಿಕೆಗೆ ಶೈಕ್ಷಣಿಕ ಹಿರಿಮೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಕೆಳಗಿನಂತೆ ನಿಬಂಧನೆಗಳನ್ನು ವಿಧಿಸಲಾಗಿರುತ್ತದೆ.

- ವಿದ್ಯಾರ್ಥಿವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು 9 ಮತ್ತು 11ನೇ ತರಗತಿಗಳಲ್ಲಿ ಕನಿಷ್ಠ ಶೇ.55 ರಷ್ಟು ಮತ್ತು 10ನೇ ತರಗತಿಯಲ್ಲಿ ಕನಿಷ್ಠ ಶೇ.60 ರಷ್ಟು ಅಂಕಗಳನ್ನು ಗಳಿಸಬೇಕಾಗುತ್ತದೆ. ಪ.ಜಾತಿ/ಪ.ಪಂ ವಿದ್ಯಾರ್ಥಿಗಳಿಗೆ ಶೇ.5ರಷ್ಟು ವಿನಾಯಿತಿ ಇರುತ್ತದೆ.
- ವಿದ್ಯಾರ್ಥಿವೇತನದ ಮುಂದುವರಿಕೆಗೆ ವಿದ್ಯಾರ್ಥಿಯು ಅಧ್ಯಯನ ನಡೆಸುತ್ತಿರುವ ತರಗತಿಯ ಫಲಿತಾಂಶ ಪ್ರಕಟವಾದ ನಂತರದ 3 ತಿಂಗಳ ಒಳಗಾಗಿ ಮುಂದಿನ ತರಗತಿಗೆ ದಾಖಲಾತಿ ಪಡೆಯುವುದು ಕಡ್ಡಾಯ.

- ಆಯ್ಕೆಯಾದ ವಿದ್ಯಾರ್ಥಿಗಳು ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆ/ಕಾಲೇಜಿನಲ್ಲಿ ಮಾತ್ರ ತಮ್ಮ ವಿದ್ಯಾಭ್ಯಾಸ ಮುಂದುವರಿಸಬೇಕು.
- ವಿದ್ಯಾರ್ಥಿಯು 9, 10 ಮತ್ತು 11ನೇ ತರಗತಿಯಲ್ಲಿ ಪ್ರಥಮ ಪ್ರಯತ್ನ (First Attempt) ದಲ್ಲೇ ತೇರ್ಗಡೆಯಾಗಬೇಕು
- ವಿದ್ಯಾರ್ಥಿಗಳು ಯಾವುದಾದರೂ ಒಂದು ಯೋಜನೆಯ ವಿದ್ಯಾರ್ಥಿವೇತನವನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.
- ITI ಹಾಗೂ Diploma ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವವರು ವಿದ್ಯಾರ್ಥಿವೇತನಕ್ಕೆ ಅರ್ಹರಾಗಿರುವುದಿಲ್ಲ.
- ವಿದೇಶಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಅರ್ಹರಾಗಿರುವುದಿಲ್ಲ.

## 2025-26 ನೇ ಸಾಲಿನ NMMS ಪರೀಕ್ಷೆಯ ಶುಲ್ಕದ ವಿವರಗಳು:-

| ಸಂಸ್ಥೆಗಳು / ಶಾಲೆಯ ವಿಧ | ಪರೀಕ್ಷಾ ಶುಲ್ಕ | |
|---|---|---|
| ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳು | ಸಾಮಾನ್ಯ, ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ | ರೂ.20/- |
| | ಪ.ಜಾ/ಪ.ಪಂ. ವಿದ್ಯಾರ್ಥಿಗಳಿಗೆ | ರೂ.10/- |

## NMMS ಪರೀಕ್ಷೆಯ ಅರ್ಜಿಯನ್ನು Online ಮೂಲಕ ಸಲ್ಲಿಸುವಾಗ ಮುಖ್ಯಶಿಕ್ಷಕರು ಗಮನಿಸಬೇಕಾದ ಅಂಶಗಳು:-

- **ದಿನಾಂಕ: 10.09.2025ರಿಂದ NMMS ಪರೀಕ್ಷೆಗೆ Online** ಮೂಲಕ ಅರ್ಜಿ ಆಹ್ವಾನಿಸಲಾಗಿದೆ.
- ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ:15.10.2025** ಆಗಿರುತ್ತದೆ.
- ಸದರಿ ಅರ್ಜಿಯು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ವೆಬ್‌ಸೈಟ್ Home page ನ NMMS Login ನಲ್ಲಿ ಲಭ್ಯವಿದ್ದು, **ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರು/ ಪ್ರಾಂಶುಪಾಲರೇ** ತಮ್ಮ ಶಾಲೆಯ ವಿದ್ಯಾರ್ಥಿಗಳ ಅರ್ಜಿಯನ್ನು Online ಮೂಲಕ ಭರ್ತಿ ಮಾಡಲು ತಿಳಿಸಿದೆ.
- ಅರ್ಜಿ ಭರ್ತಿ ಮಾಡಲು ಸಹಾಯವಾಗುವಂತೆ USER Manual & Flow Chart ಅನ್ನು ಮಂಡಲಿಯ ವೆಬ್‌ಸೈಟ್‌ನಲ್ಲಿ ಲಭ್ಯ ಮಾಡಲಾಗಿರುತ್ತದೆ.
- **ಶಾಲೆಯ ಮುಖ್ಯಶಿಕ್ಷಕರು NMMS ಪರೀಕ್ಷೆಗೆ Online** ಮೂಲಕ ಅರ್ಜಿ ಸಲ್ಲಿಸುವಾಗ **NMMS** Login ನಲ್ಲಿ ಶಾಲೆಯ U-DISE ಕೋಡ್ ಬಳಸಿಯೇ Login ಆಗುವುದು ಕಡ್ಡಾಯವಾಗಿರುತ್ತದೆ. ಶಾಲೆಯ U-DISE ಸಂಕೇತವನ್ನೇ **User Name** ಆಗಿ ಬಳಸಿ Login ಆಗುವುದು. ಮಂಡಲಿಯ ವತಿಯಿಂದ Default Password ನೀಡಲಾಗಿದ್ದು, ಮೊದಲ ಬಾರಿ ಲಾಗಿನ್ ಆಗುವಾಗ Password ಬದಲಾವಣೆ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ ಹಾಗೂ **ಒಂದು ಬಾರಿ ಮೊಬೈಲ್ ಸಂಖ್ಯೆ ಬದಲಾವಣೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು. ಮುಖ್ಯ ಶಿಕ್ಷಕರು ಎಚ್ಚರಿಕೆಯಿಂದ ತಮ್ಮ ಮೊಬೈಲ್ ಸಂಖ್ಯೆಯನ್ನು ಬದಲಾವಣೆ ಮಾಡಿಕೊಳ್ಳಲು ತಿಳಿಸಿದೆ. ಪದೇ ಪದೇ ಮೊಬೈಲ್ ಸಂಖ್ಯೆ ಬದಲಾಯಿಸಲು ಅವಕಾಶವಿರುವುದಿಲ್ಲ.**

  **ಉದಾ : ಶಾಲೆಯೊಂದರ** U- DISE ಸಂಕೇತ **29310300112 ಆಗಿದ್ದಲ್ಲಿ**

  **User Name: 29310300112**
  **Default Password: 29310300112@123**

- ಮೊಬೈಲ್ ಸಂಖ್ಯೆಯನ್ನು ನಮೂದಿಸಲು ನಿಗದಿಪಡಿಸಿರುವ ಜಾಗದಲ್ಲಿ ಮುಖ್ಯ ಶಿಕ್ಷಕರ ಮೊಬೈಲ್ ಸಂಖ್ಯೆಯನ್ನು ನಮೂದಿಸುವುದು, ಸದರಿ ಮೊಬೈಲ್ ಸಂಖ್ಯೆಗೆ OTP ಬರುತ್ತದೆ. ಮುಖ್ಯ ಶಿಕ್ಷಕರು/ಶಿಕ್ಷಕರು ಅರ್ಜಿ ಸಲ್ಲಿಸುವುದು ಕಡ್ಡಾಯ. ಯಾವುದೇ ಕಾರಣಕ್ಕೂ ಪೋಷಕರಿಗೆ **User Name** ಮತ್ತು **Password** ನೀಡಬಾರದು
- ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 8ನೇ ತರಗತಿ ವಿದ್ಯಾರ್ಥಿಗಳು ಮಾತ್ರ NMMS ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ ಹಾಗೂ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.3,50,000/- ಮೀರಿರಬಾರದು **(ಎಸ್‌ಸಿ,ಎಸ್‌ಟಿ ಹಾಗೂ ಎಲ್ಲಾ ವರ್ಗದವರನ್ನೊಳಗೊಂಡಂತೆ)**

- ಮುಖ್ಯ ಶಿಕ್ಷಕರು ತಮ್ಮ ಶಾಲೆಯ ಬ್ಯಾಂಕ್ ಖಾತೆಯ ವಿವರವನ್ನು ಅರ್ಜಿಯಲ್ಲಿ ಕಡ್ಡಾಯವಾಗಿ ನಮೂದಿಸಬೇಕು.
- NMMS ಪರೀಕ್ಷೆಯ ಅರ್ಜಿಯನ್ನು ಶಾಲಾ ಮುಖ್ಯಸ್ಥರು ಮಂಡಲಿಯ https://kseab.karnataka.gov.in/ ವೆಬ್‌ಸೈಟ್ ಮೂಲಕ Login ಆಗಿ **"NMMS Application Form"** ಎಂಬ link ಮೂಲಕ ಭರ್ತಿಮಾಡುವುದು. ಮಂಡಲಿಯ ವೆಬ್‌ಸೈಟ್‌ನ ಮುಖ ಪುಟದಲ್ಲಿನ NMMS Login ಮೂಲಕ Login ಆದಾಗ ಅರ್ಜಿ ಭರ್ತಿ ಮಾಡುವ ಮೊದಲು ಗೋಚರಿಸುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಂಡು ಅರ್ಜಿ ಭರ್ತಿಮಾಡಬೇಕು.
- ಸರ್ಕಾರಿ, ಅನುದಾನಿತ ಮತ್ತು ಸ್ಥಳೀಯ ಸಂಸ್ಥೆಗಳ ಶಾಲೆಯ ಮುಖ್ಯಶಿಕ್ಷಕರು/ಪ್ರಾಂಶುಪಾಲರು NMMS ಪರೀಕ್ಷೆಗೆ ಅರ್ಜಿ ಸಲ್ಲಿಸಲು https://kseab.karnataka.gov.in/ ವೆಬ್‌ಸೈಟ್‌ನಲ್ಲಿ ತಮ್ಮ ಶಾಲೆಯ **UDISE** Code ಮೂಲಕ Login ಆಗುವುದು. ನಂತರ NMMS ಪರೀಕ್ಷೆಗೆ ಅರ್ಜಿ ಸಲ್ಲಿಸುವ Menu ಅನ್ನು Click ಮಾಡುವುದು. ಆಗ ಅರ್ಜಿ ನಮೂನೆಯು Open ಆಗುತ್ತದೆ.
- **ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಯಾವುದೇ ಕಾರಣಕ್ಕೂ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳಿಗೆ ತಮ್ಮ ಶಾಲೆಯ User Name ಮತ್ತು Password ಅನ್ನು ನೀಡುವಂತಿಲ್ಲ ಹಾಗೂ ವಿದ್ಯಾರ್ಥಿಗಳಿಂದ ಮಾಹಿತಿಗಳನ್ನು ಪಡೆದು ಶಾಲಾ ಮುಖ್ಯಶಿಕ್ಷಕರು/ ಪ್ರಾಂಶುಪಾಲರೇ ಕಡ್ಡಾಯವಾಗಿ ಶಾಲಾ ಹಂತದಲ್ಲಿಯೇ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡುವುದು.**
- ಮುಖ್ಯಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ SATS ಸಂಖ್ಯೆಯನ್ನು ನಮೂದಿಸುವುದು. ನಮೂದಿಸಲ್ಪಟ್ಟ SATS ಸಂಖ್ಯೆಯನ್ನು ಆಧರಿಸಿ ಸಂಬಂಧಿಸಿದ ವಿದ್ಯಾರ್ಥಿ ಮತ್ತು ಶಾಲಾ **ಮಾಹಿತಿಯು (fetch)** ತೆರೆದುಕೊಳ್ಳುತ್ತದೆ. (ಕ್ರಮ ಸಂಖ್ಯೆ 1 ರಿಂದ 11ರ ವಿವರಗಳು)
- ಶಾಲೆಯ ವಿಳಾಸಕ್ಕೆ ಸಂಬಂಧಿಸಿದ ಪಿನ್‌ಕೋಡ್ ನಮೂದಿಸಲು ಅವಕಾಶವನ್ನು ನೀಡಲಾಗಿದ್ದು, ಪಿನ್‌ಕೋಡ್ ನಮೂದಿಸುವುದು ಕಡ್ಡಾಯವಾಗಿರುತ್ತದೆ. ಅರ್ಜಿ ಭರ್ತಿ ಮಾಡುವ ಸಂದರ್ಭದಲ್ಲಿ SATS ನಲ್ಲಿನ ಮಾಹಿತಿಗಳಿಗೆ ಸಂಬಂಧಿಸಿದಂತೆ ಯಾವುದೇ ತಿದ್ದುಪಡಿಗಳಿಗೆ ಅವಕಾಶವಿರುವುದಿಲ್ಲ. ಒಂದು ವೇಳೆ ತಿದ್ದುಪಡಿಗಳಿದ್ದಲ್ಲಿ SATS ನಲ್ಲಿ ಮೊದಲು ತಿದ್ದುಪಡಿ ಮಾಡಬೇಕು, ನಂತರ ಸದರಿ ತಿದ್ದುಪಡಿ ಮಾಹಿತಿಗಳು NMMS ಪರೀಕ್ಷೆಯ Edit Form ನಲ್ಲಿ Sync SATS Data ಎಂಬ Tab ಅನ್ನು Click ಮಾಡಿದಲ್ಲಿ ತಿದ್ದುಪಡಿಯಾದ ಮಾಹಿತಿಗಳು ಗೋಚರಿಸುತ್ತವೆ. ತಿದ್ದುಪಡಿಯಾದ ಮಾಹಿತಿಗಳು Update ಆಗಿರುವ ಬಗ್ಗೆ ಖಾತ್ರಿಪಡಿಸಿಕೊಂಡ ನಂತರ ಅರ್ಜಿ ಸಲ್ಲಿಸುವುದು.
- ಅರ್ಜಿಯಲ್ಲಿನ ಕ್ರಮ ಸಂಖ್ಯೆ 12ರಿಂದ ವಿದ್ಯಾರ್ಥಿಯ ಮಾಹಿತಿಯನ್ನು ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರು/ ಪ್ರಾಂಶುಪಾಲರೇ ತಪ್ಪದೇ ಭರ್ತಿ ಮಾಡಬೇಕು. ಅರ್ಜಿ ಸಲ್ಲಿಸಿದ ನಂತರ **ಅರ್ಜಿಯ ಒಂದು ಪ್ರತಿ ಹಾಗೂ ಪೂರಕ ಪ್ರಮಾಣ ಪತ್ರಗಳ ಒಂದು ಸೆಟ್ ದಾಖಲೆಗಳನ್ನು ಶಾಲೆಯಲ್ಲಿ ಕಾಯ್ದಿರಿಸುವುದು ಕಡ್ಡಾಯ.**
- ಈ ಪರೀಕ್ಷೆಗೆ ಅರ್ಜಿ ಸಲ್ಲಿಸುವ SC, ST, ಇತರೆ ಹಿಂದುಳಿದ ವರ್ಗ (OBC) ಹಾಗೂ ವಿಕಲಚೇತನ ಅಭ್ಯರ್ಥಿಗಳು ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು.
- SC, ST ಹಾಗೂ ಇತರೆ ಹಿಂದುಳಿದ ವರ್ಗದ (OBC) ಮೀಸಲಾತಿ ಕೋರುವ ವಿದ್ಯಾರ್ಥಿಗಳು **ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸಲ್ಲಿಸುವುದು** ಕಡ್ಡಾಯವಾಗಿರುತ್ತದೆ. ಪ್ರಮಾಣ ಪತ್ರಗಳಲ್ಲಿರುವ RD Number/ ಸಂಖ್ಯೆಯನ್ನು ಹಾಗೂ ಆದಾಯ ಪ್ರಮಾಣ ಪತ್ರದಲ್ಲಿ ಇರುವಂತೆ ಆದಾಯವನ್ನು ಆನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ ಭರ್ತಿ ಮಾಡುವುದು ಹಾಗೂ ಸಂಬಂಧಿಸಿದ ವಿದ್ಯಾರ್ಥಿಗಳ ಪ್ರಮಾಣ ಪತ್ರವನ್ನು ಶಾಲಾ ಹಂತದಲ್ಲಿ ಕಾಯ್ದಿರಿಸುವುದು.
- ವಿದ್ಯಾರ್ಥಿಯ ವಿಕಲಚೇತನಕ್ಕೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರದಿಂದ (ಜಿಲ್ಲಾ ವೈದ್ಯಕೀಯ ಮಂಡಳಿ) ಪಡೆದ ಪ್ರಮಾಣ ಪತ್ರವನ್ನು ಆಧರಿಸಿ Disability Status ಅನ್ನು ನಮೂದಿಸುವುದು.
- SC, ST, OBC ಹಾಗೂ ವಿಕಲಚೇತನ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಮುಖ್ಯಶಿಕ್ಷಕರು/ಪ್ರಾಂಶುಪಾಲರಿಗೆ ಸಲ್ಲಿಸುವ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಪೂರ್ವದಲ್ಲಿ ಪಡೆದಿರಬೇಕು ಮತ್ತು ಸದರಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರಬೇಕು. ಈ ಬಗ್ಗೆ ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಖಾತ್ರಿಪಡಿಸಿಕೊಂಡು ವಿದ್ಯಾರ್ಥಿಗಳ ಅರ್ಜಿಯನ್ನು ಭರ್ತಿಮಾಡಬೇಕು ಹಾಗೂ ಪ್ರಮಾಣ ಪತ್ರಗಳು ನೈಜತೆ ಮತ್ತು ಚಾಲ್ತಿಯಲ್ಲಿ ಇರದಿದ್ದಲ್ಲಿ ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರೇ ಹೊಣೆಗಾರರಾಗಿರುತ್ತಾರೆ.
- ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳ ಒಂದು ಪ್ರತಿಯನ್ನು ಮುಖ್ಯಶಿಕ್ಷಕರು/ಪ್ರಾಂಶುಪಾಲರು ವಿದ್ಯಾರ್ಥಿಗಳಿಂದ ಪಡೆದು ಶಾಲಾ ಹಂತದಲ್ಲಿ ಕಾಯ್ದಿರಿಸಬೇಕು ಹಾಗೂ ವಿದ್ಯಾರ್ಥಿಗಳಿಂದ ಪಡೆದು ಕಾಯ್ದಿರಿಸಿದ ದಾಖಲೆಗಳನ್ನು ಮುಂದಿನ ದಿನಗಳಲ್ಲಿ ಪರಿಶೀಲನೆಗಾಗಿ ಕಡ್ಡಾಯವಾಗಿ ಇಲಾಖೆಗೆ ನೀಡುವುದು.

- ವಿದ್ಯಾರ್ಥಿ/ನಿಯ ಬ್ಯಾಂಕ್ ಖಾತೆ ತೆರೆದಿದ್ದಲ್ಲಿ ಈ ಖಾತೆಗೆ ಸಂಬಂಧಿಸಿದ ಮಾಹಿತಿಗಳನ್ನು ನಮೂದಿಸುವುದು (ಬ್ಯಾಂಕ್ ಖಾತೆಯ ಸಂಖ್ಯೆ, ಬ್ಯಾಂಕ್ ಹೆಸರು, ಬ್ಯಾಂಕ್ ಶಾಖೆ, ಬ್ಯಾಂಕ್ IFSC Code).
- ವಿದ್ಯಾರ್ಥಿ/ನಿಯ Photo ಮತ್ತು ಸಹಿಯನ್ನು ಅರ್ಜಿ ಭರ್ತಿ ಮಾಡುವ ಮೊದಲೇ JPEG Format ನಲ್ಲಿ Scan ಮಾಡಿಟ್ಟುಕೊಳ್ಳುವುದು.
- ವಿದ್ಯಾರ್ಥಿ/ನಿ Photo (Size 60-80 kb) JPEG Format ನಲ್ಲಿ Upload ಮಾಡುವುದು.
- ವಿದ್ಯಾರ್ಥಿ/ನಿ ಸಹಿಯನ್ನು (Size 20-50 kb) JPEG Format ನಲ್ಲಿ Upload ಮಾಡುವುದು.
- ದೃಢೀಕರಣ ಭಾಗದಲ್ಲಿ ನೀಡಿರುವ ಅಂಶಗಳನ್ನು ಓದಿ ಸರಿಯಾಗಿರುವುದನ್ನು ಖಾತರಿಪಡಿಸಿಕೊಂಡು ನಂತರ ಎಡಭಾಗದಲ್ಲಿ ನೀಡಿರುವ Check Box ಗೆ ಗುರುತು ✓ ಮಾಡಿ 'Submit' ಮಾಡುವುದು.
  - **ಪರೀಕ್ಷೆಯ ಪ್ರವೇಶ ಪತ್ರವನ್ನು ಪರೀಕ್ಷಾ ದಿನಾಂಕದ 15 ದಿನಗಳ ಮುಂಚಿತವಾಗಿ NMMS** Login ನಲ್ಲಿ ಲಭ್ಯ ಮಾಡಲಾಗುವುದು. Login ಆಗಿ Download ಮಾಡಿಕೊಳ್ಳುವುದು ಹಾಗೂ ಮಾಹಿತಿಯು ಸರಿಯಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು ನಂತರ ವಿದ್ಯಾರ್ಥಿಗಳಿಗೆ ವಿತರಿಸುವುದು.
  - ಅರ್ಜಿ Submit ಮಾಡಿದ ನಂತರ Edit Option ನೀಡಲಾಗಿದೆ. ಅರ್ಜಿ ಸಲ್ಲಿಸಿದ ನಂತರವೂ ಅರ್ಜಿಯಲ್ಲಿ ನಮೂದು(Entry) ಮಾಡಲಾಗಿರುವ ಮಾಹಿತಿಗಳಲ್ಲಿ ತಿದ್ದುಪಡಿಗಳಿದ್ದಲ್ಲಿ ಕ್ರಮ ಸಂಖ್ಯೆ 1 ರಿಂದ 11 ರ ವಿವರಗಳನ್ನು SATS ನಲ್ಲಿ ಹಾಗೂ ಕ್ರ. ಸಂ. 12 ರ ನಂತರದ ಮಾಹಿತಿಗಳನ್ನು NMMS Edit Application Form Button Click ಮಾಡಿ ತಿದ್ದುಪಡಿ ಮಾಡಿ ಅರ್ಜಿಯನ್ನು ಮತ್ತೊಮ್ಮೆ Submit ಮಾಡಲು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದವರೆಗೂ ಅವಕಾಶ ಕಲ್ಪಿಸಲಾಗಿದ್ದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮುಕ್ತಾಯವಾದ ನಂತರ ಯಾವುದೇ ತಿದ್ದುಪಡಿಗಳಿಗೆ ಅವಕಾಶವಿರುವುದಿಲ್ಲ.
  - ಅರ್ಜಿ ಸಲ್ಲಿಸಿದ ನಂತರ ಪ್ರತಿ ವಿದ್ಯಾರ್ಥಿಯ Report ಅನ್ನು ಮುದ್ರಿಸಿಕೊಂಡು Report ನಲ್ಲಿ ನಿಗದಿಪಡಿಸಿರುವ ಜಾಗದಲ್ಲಿ ವಿದ್ಯಾರ್ಥಿಗಳ/ಪೋಷಕರ ಸಹಿ ಪಡೆದು ಶಾಲೆಗಳಲ್ಲಿ ಕಾಯ್ದಿರಿಸುವುದು.
  - ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಸಂಭವಿಸುವ ತಾಂತ್ರಿಕ ಅಡಚಣೆ ಹಾಗೂ ಇನ್ನಿತರ ಮಾಹಿತಿಗಳಿಗಾಗಿ ಕಛೇರಿ ಕರ್ತವ್ಯದ ಸಮಯದಲ್ಲಿ ಈ ಕಛೇರಿಯ ದೂರವಾಣಿ ಸಂಖ್ಯೆ:080-**23341615 ಗೆ** ಕರೆ ಮಾಡುವುದು ಮತ್ತು ಸಮಸ್ಯೆಯ ವಿವರವನ್ನು ಈ ಕಛೇರಿಯ ಇ-ಮೇಲ್ ವಿಳಾಸ **ksqaacntsenmms@gmail.com** ಗೆ ಕಳುಹಿಸುವುದು.
  - **ಅರ್ಜಿ ಸಲ್ಲಿಕೆಯ ಅಂತಿಮ ದಿನಾಂಕದೊಳಗಾಗಿ ಶುಲ್ಕ ಪಾವತಿಸುವ ವಿಧಾನದ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.**

## NMMS ಪರೀಕ್ಷಾ ಕಾರ್ಯದಲ್ಲಿ ಉಪನಿರ್ದೇಶಕರು (ಆಡಳಿತ) ರವರ ಜವಾಬ್ದಾರಿಗಳು:-

- NMMS ಪರೀಕ್ಷೆಯ ರೂಪುರೇಷೆ ಹಾಗೂ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳ ಸಭೆ ಕರೆದು ಸಂಪೂರ್ಣ ಮಾಹಿತಿ ಒದಗಿಸುವುದು.
- NMMS ಪರೀಕ್ಷೆಯ ಬಗ್ಗೆ ಮಾಧ್ಯಮಗಳಲ್ಲಿ ಜಾಹೀರಾತು/ಪ್ರಕಟಣೆ ನೀಡಿ ಪರೀಕ್ಷೆಯ ಮಹತ್ವವನ್ನು ಪ್ರಚಾರ ಮಾಡುವುದು. ಆ ಮೂಲಕ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗುವಂತೆ ಕ್ರಮವಹಿಸುವುದು ಹಾಗೂ ಪತ್ರಿಕಾ ಪ್ರಕಟಣೆಯ ಒಂದು ಪ್ರತಿಯನ್ನು ಕೆ.ಎಸ್.ಕ್ಯೂ.ಎ.ಎ.ಸಿ ಕಛೇರಿಗೆ ಇ-ಮೇಲ್ ಮೂಲಕ ಕಳುಹಿಸುವುದು.
- ಶಾಲಾ ಮುಖ್ಯಶಿಕ್ಷಕರ ಸಭೆ ಕರೆದು ಪರೀಕ್ಷೆ ಬಗ್ಗೆ ಮಾಹಿತಿ ನೀಡುವುದು.
- ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.

## NMMS ಪರೀಕ್ಷಾ ಕಾರ್ಯದಲ್ಲಿ ಉಪನಿರ್ದೇಶಕರು (ಅಭಿವೃದ್ಧಿ) ರವರ ಜವಾಬ್ದಾರಿಗಳು:-

- NMMS ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸುವ ಬಗ್ಗೆ ಸಂಪೂರ್ಣ ಉಸ್ತುವಾರಿ ವಹಿಸುವುದು.
- NMMS ಪರೀಕ್ಷೆಯ ಬಗ್ಗೆ ಮಾಧ್ಯಮಗಳಲ್ಲಿ ಜಾಹೀರಾತು/ಪ್ರಕಟಣೆ ನೀಡಿ ಪರೀಕ್ಷೆಯ ಮಹತ್ವವನ್ನು ಪ್ರಚಾರ ಮಾಡುವುದು. ಆ ಮೂಲಕ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗುವಂತೆ

ಕ್ರಮವಹಿಸುವುದು ಹಾಗೂ ಪತ್ರಿಕಾ ಪ್ರಕಟಣೆಯ ಒಂದು ಪ್ರತಿಯನ್ನು ಕೆ.ಎಸ್.ಕ್ಯು.ಎ.ಎ.ಸಿ ಕಛೇರಿಗೆ ಇ-ಮೇಲ್ ಮೂಲಕ ಕಳುಹಿಸುವುದು.

- ಜಿಲ್ಲಾ ಹಂತದಲ್ಲಿ ಸದರಿ ಪರೀಕ್ಷೆ ಆಯೋಜನೆಗೆ ಜಿಲ್ಲಾ ಹಂತದ ನೋಡಲ್ ಅಧಿಕಾರಿಯನ್ನು ನೇಮಿಸುವುದು.
- ತಮ್ಮ ಜಿಲ್ಲಾ ವ್ಯಾಪ್ತಿಯ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ/ಪ್ರೌಢಶಾಲಾ ಮುಖ್ಯಶಿಕ್ಷಕರ ಸಭೆ ಕರೆದು ಪರೀಕ್ಷೆಯ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು.
- ಗರಿಷ್ಠ ಪ್ರಮಾಣದ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅಗತ್ಯ ಕ್ರಮವಹಿಸುವುದು.
- ಅಗತ್ಯ ಸಂಖ್ಯೆಯ ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ ರಾಜ್ಯ ಕಛೇರಿಗೆ ಸಲ್ಲಿಸುವುದು.
- ಪರೀಕ್ಷಾ ಸಂಬಂಧ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಕೆ.ಎಸ್.ಕ್ಯು.ಎ.ಎ.ಸಿಯ ಸೂಚನೆಯಂತೆ ಸಭೆಗಳಿಗೆ ನೋಡಲ್ ಅಧಿಕಾರಿಯು ಹಾಜರಾಗುವಂತೆ ಕ್ರಮವಹಿಸುವುದು.
- ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿನೀಡಿ ಪರಿಶೀಲಿಸುವುದು.
- ಪರೀಕ್ಷಾ ಸಂಬಂಧ ಬಿಡುಗಡೆಯಾಗುವ ಅನುದಾನದಲ್ಲಿ ನಿಯಮಾನುಸಾರ ವೆಚ್ಚ ಭರಿಸಿ, ಲೆಕ್ಕಪತ್ರಗಳನ್ನು ನಿರ್ವಹಿಸುವುದು ಹಾಗೂ ನಿಗದಿತ ಸಮಯದೊಳಗೆ ಉಪಯೋಗಿತ ಪ್ರಮಾಣ ಪತ್ರವನ್ನು ಈ ಕಛೇರಿಗೆ ಸಲ್ಲಿಸುವುದು.

## NMMS ಪರೀಕ್ಷಾ ಕಾರ್ಯದಲ್ಲಿ ಕ್ಷೇತ್ರಶಿಕ್ಷಣಾಧಿಕಾರಿಗಳ ಜವಾಬ್ದಾರಿಗಳು:-

- ತಾಲ್ಲೂಕಿನ ಎಲ್ಲಾ ಸರ್ಕಾರಿ ಪ್ರೌಢಶಾಲೆ, ಕೆ.ಪಿ.ಎಸ್. ಶಾಲೆ, ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆ ಹಾಗೂ 8ನೇ ತರಗತಿ ಬೋಧಿಸುತ್ತಿರುವ ಅನುದಾನಿತ ಶಾಲೆಗಳ ಮುಖ್ಯೋಪಾಧ್ಯಾಯರ ಸಭೆಯನ್ನು ಆಯೋಜಿಸಿ NMMS ಪರೀಕ್ಷೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ಹಾಗೂ ಪ್ರತಿ ಶಾಲೆಯಿಂದ ಅರ್ಹ ವಿದ್ಯಾರ್ಥಿಗಳು ಗರಿಷ್ಠ ಪ್ರಮಾಣದಲ್ಲಿ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆ ಬರೆಯಲು ಕ್ರಮವಹಿಸುವುದು.
- NMMS ಪರೀಕ್ಷೆಯ ಬಗ್ಗೆ ಮಾಧ್ಯಮಗಳಲ್ಲಿ ಜಾಹೀರಾತು/ಪ್ರಕಟಣೆ ನೀಡಿ ಪರೀಕ್ಷೆಯ ಮಹತ್ವವನ್ನು ಪ್ರಚಾರ ಮಾಡುವುದು. ಆ ಮೂಲಕ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗುವಂತೆ ಕ್ರಮವಹಿಸುವುದು.
- ತಮ್ಮ ತಾಲ್ಲೂಕು ವ್ಯಾಪ್ತಿಯ ಪರೀಕ್ಷಾ ವ್ಯವಸ್ಥೆಯ ಸಂಪೂರ್ಣ ಜವಾಬ್ದಾರಿಯನ್ನು ಕ್ರಮಬದ್ಧವಾಗಿ ನಿರ್ವಹಿಸುವುದು.
- ಪರೀಕ್ಷೆ ನಡೆಯುವ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.
- ಪರೀಕ್ಷೆಯ ಪೂರ್ವ ಮತ್ತು ಪರೀಕ್ಷಾ ಸಮಯದಲ್ಲಿನ ಕಾರ್ಯಚಟುವಟಿಕೆಗಳ ಅನುಷ್ಠಾನಕ್ಕೆ ಕ್ಷೇತ್ರಸಂಪನ್ಮೂಲ ಸಮನ್ವಯಾಧಿಕಾರಿ, ಇ.ಸಿ.ಒ, ಬಿ.ಆರ್.ಪಿ ಹಾಗೂ ಸಿ.ಆರ್.ಪಿಗಳಿಗೆ ಕಾರ್ಯ ಹಂಚಿಕೆಮಾಡಿ ಸಕ್ರಿಯವಾಗಿ ಕಾರ್ಯನಿರ್ವಹಿಸುವಂತೆ ಕ್ರಮವಹಿಸುವುದು.
- ಇದುವರೆಗೆ ಯಾವುದಾದರೂ ಶಾಲೆಯ ವಿದ್ಯಾರ್ಥಿಗಳನ್ನು SATS ನಲ್ಲಿ ನೋಂದಾಯಿಸದೇ ಇದ್ದಲ್ಲಿ ಕಡ್ಡಾಯವಾಗಿ ನೊಂದಾಯಿಸಲು ಕ್ರಮಕೈಗೊಂಡು ವಿದ್ಯಾರ್ಥಿಗಳು Online ನಲ್ಲಿ ಅರ್ಜಿ ಸಲ್ಲಿಸಲು ತಕ್ಷಣ ಕ್ರಮಕೈಗೊಳ್ಳುವುದು.
- ಶಾಲಾ ಹಂತದಲ್ಲಿ ಮುಖ್ಯಶಿಕ್ಷಕರು/ಪ್ರಾಂಶುಪಾಲರು ವಿದ್ಯಾರ್ಥಿಗಳ ಪೂರ್ವ ಸಿದ್ಧತೆಗಾಗಿ ಡಿ.ಎಸ್.ಇ.ಆರ್.ಟಿ ಮತ್ತು ಕೆ.ಎಸ್.ಇ.ಎ.ಬಿ ಜಾಲತಾಣದಲ್ಲಿ ಲಭ್ಯವಿರುವ ಹಿಂದಿನ ಸಾಲುಗಳ ಪ್ರಶ್ನೆಪತ್ರಿಕೆಗಳನ್ನು ಹಾಗೂ ಈಗಾಗಲೇ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ಶಾಲೆಗಳಿಗೆ ಸರಬರಾಜು ಮಾಡಿರುವ ಸ್ಪರ್ಧಾ ಯಶಸ್ಸು ಅಧ್ಯಯನ ಸಾಮಗ್ರಿಯನ್ನು ಬಳಸಬಹುದಾಗಿರುತ್ತದೆ.
- ಪರೀಕ್ಷಾ ಕೇಂದ್ರಗಳನ್ನು ಆಯ್ಕೆ ಮಾಡುವಾಗ ತಾಲ್ಲೂಕು ಕೇಂದ್ರದಿಂದ ಸಮೀಪದಲ್ಲಿರುವ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಶಾಲೆ/ಕಾಲೇಜುಗಳನ್ನು ಪರೀಕ್ಷಾ ಕೇಂದ್ರಗಳಾಗಿ ಆಯ್ಕೆ ಮಾಡಿ ನೀಡುವುದು.

**ವಿಶೇಷ ಸೂಚನೆ:- ಮುಖ್ಯಶಿಕ್ಷಕರು/ಪ್ರಾಂಶುಪಾಲರು Online ಅರ್ಜಿಯಲ್ಲಿನ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕು. ಈ ಕಛೇರಿ ಹಂತದಲ್ಲಿ ಯಾವುದೇ ತಿದ್ದುಪಡಿಗಳಿಗೆ ಅವಕಾಶವಿಲ್ಲದಿರುವುದರಿಂದ ಅರ್ಜಿಯನ್ನು ಭರ್ತಿ ಮಾಡಿದ ನಂತರ ಎಲ್ಲಾ ಮಾಹಿತಿಗಳು ಸರಿ ಇರುವುದನ್ನು ಖಾತ್ರಿಪಡಿಸಿಕೊಂಡು Submit ಮಾಡುವುದು. ಅರ್ಜಿಯನ್ನು Submit ಮಾಡಿದ ನಂತರ**

ಅರ್ಜಿಯ ಪ್ರತಿ (**Report**) ಯನ್ನು ಮತ್ತು ಪೂರಕ ದಾಖಲೆಗಳ ಒಂದು ಪ್ರತಿಯನ್ನು ಮುದ್ರಿಸಿಕೊಂಡು (**Printout**) ಶಾಲೆಯಲ್ಲಿ ಕಾಯ್ದಿರಿಸುವುದು. ಅರ್ಜಿಯಲ್ಲಿ ಯಾವುದೇ ತಪ್ಪು, ಅಪೂರ್ಣ ಮಾಹಿತಿಗಳಿದ್ದಲ್ಲಿ ಹಾಗೂ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.3,50,000/- ಮೀರಿದ ಅರ್ಜಿಗಳನ್ನು ಸಲ್ಲಿಸಿದಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯಸ್ಥರೇ ಹೊಣೆಗಾರರಾಗಿರುತ್ತಾರೆ ಹಾಗೂ ಈ ಬಗ್ಗೆ ಸಂಬಂಧಪಟ್ಟ ಮುಖ್ಯ ಶಿಕ್ಷಕರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಈ ಮೂಲಕ ತಿಳಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:-

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರಿಗೆ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ), ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ರವರಿಗೆ.
3. ಜಿಲ್ಲಾ ಡಯಟ್ ನೋಡಲ್ ಅಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ರವರಿಗೆ.
4. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ರವರಿಗೆ.
5. ಎಲ್ಲಾ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಮುಖ್ಯಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ರವರ ಮೂಲಕ).

ಪ್ರತಿಯನ್ನು:-

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
4. ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
5. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
6. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
7. ನಿರ್ದೇಶಕರು ಪ್ರಾಥಮಿಕಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಮಾಹಿತಿಗಾಗಿ.
8. ನಿರ್ದೇಶಕರು ಉರ್ದು ಮತ್ತು ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಮಾಹಿತಿಗಾಗಿ.
9. ನಿರ್ದೇಶಕರು ಪ್ರೌಢಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಮಾಹಿತಿಗಾಗಿ.
10. ಕಛೇರಿ ಪ್ರತಿ.